**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 1354/2025**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.07**

**ದಿನಾಂಕಃ 13.03.2025** **ಸಿಡಬ್ಲ್ಯೂ.09**

| | |
|---|---|
| ಹೆಸರು | ವೆಂಕಟರಮಣ |
| ತಂದೆ ಹೆಸರು | ಎನ್ ಸಿಂಗಾರಯ್ಯ |
| ವಯಸ್ಸು | 50 ವರ್ಷ |
| ಉದ್ಯೋಗ | ಹೆಚ್ ಸಿ 176 |
| ವಾಸ ಸ್ಥಳ | ಮಲೆಬೆನ್ನೂರು |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ನಾನು ಸನ್ 2021 ರಿಂದ ಇಲ್ಲಿಯವರೆ ಮಲೆಬೆನ್ನೂರು ಠಾಣೆಗೆಯಲ್ಲಿ ಹೆಚ್ ಸಿ ಆಗಿ ಕರ್ತವ್ಯ ನಿರ್ವಹಿಸಿದ್ದೇನೆ.

ದಿಃ 08.12.2024 ರಂದು ರಾತ್ರಿ 10.30 ಗಂಟೆಗೆ ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸಾ.1 ರವರು ಠಾಣೆಗೆ ಹಾಜರಾಗಿ ನೀಡಿದ ಗಣಕೀಕೃತ ದೂರನ್ನು ಸ್ವೀಕರಿಸಿ ಠಾಣಾ ಗುನ್ನೆ 351/2024 ರಂತೆ ಪ್ರಕರಣ ದಾಖಲಿಸಿಕೊಂಡು ಪ್ರ ವ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿಯು ಗುರುತಿಸಿದ ದೂರನ್ನು ಈಗಾಗಲೇ ನಿಪಿ.1 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಗುರುತಿಸಿದ ಪ್ರ ವ ವರದಿಯನ್ನು ನಿಪಿ. 12 ಎಂದು ಸಾಕ್ಷಿಯ ಸಹಿಯನ್ನು ನಿಪಿ.12 (ಎ) ಎಂದು ಗುರುತಿಸಲಾಯಿತು.

ನಂತರ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ.10 ರವರಿಗೆ ನೀಡಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಪಿ ಎಸ್ ಜೆ ವಕೀಲರಿಂದಃ**

ನಿಪಿ.1 ದೂರನ್ನು ಯಾರು ಎಲ್ಲಿ ಬರೆದಿರುತ್ತಾರೆ ಎಂದು ಗೊತ್ತಿಲ್ಲ. ಸಾಕ್ಷಿಯು ಮುಂದುವರೆದು ಚಾಸಾ.1 ರವರು ನೀಡಿದ್ದು ಮಾತ್ರ ಗೊತ್ತು ಎಂದು ನುಡಿಯುತ್ತಾರೆ. ದೂರು ನೀಡುವ ಕಾಲಕ್ಕೆ ಚಾಸಾ.1 ರವರೊಂದಿಗೆ ಯಾರು ಯಾರು ಬಂದಿದ್ದರು ಎಂದು ನನಗೆ ಹೇಳಲು ಬರುವುದಿಲ್ಲ. ಘಟನೆ

ದಿಃ 07.12.2024 ರಂದು ಮಧ್ಯಾಹ್ಞ 1.30 ಗಂಟೆಗೆ ನಡೆದಿರುತ್ತದೆ. ನಿಪಿ.1 ದೂರಿನಲ್ಲಿ ಗ್ರಾಮದ ಮುಖಂಡರೊಂದಿಗೆ ಚರ್ಚಿಸಿ ತಡವಾಗಿ ದೂರು ನೀಡಿರುತ್ತೇನೆ ಎಂದು ನಮೂದಿಸಿದ್ದು ಸದರಿಯವರು ಯಾರು ಯಾರು ಎಂದು ವಿಚಾರಣೆ ಮಾಡಿದ್ದೀರಾ ಎಂದರೆ ಸಾಕ್ಷಿಯು ನಾನು ದೂರು ಮಾತ್ರ ದಾಖಲಿಸಿಕೊಂಡಿರುತ್ತೇನೆ ಎಂದು ನುಡಿಯುತ್ತಾರೆ. ನಿಪಿ.1 ನ್ನು ಸ್ವೀಕರಿಸುವ ಪೂರ್ವದಲ್ಲಿ ನಾನು ಸ್ಥಳಕ್ಕೆ ಹೋಗಿ ವಿಚಾರಣೆ ಮಾಡಿಲ್ಲ. ಯಾವುದೇ ಘಟನೆ ನಡೆಯದಿದ್ದರೂ ಸಹ ಹಾಗೂ ಆರೋಪಿತರು ಯಾವುದೇ ಬ್ಯಾನರ್ ಹರಿಯದಿದ್ದರೂ ಸಹ ಚಾಸಾ.1 ರವರೊಂದಿಗೆ ಮಿಲಾಪೆಯಾಗಿ ಸುಳ್ಳು ದೂರು ಸ್ವೀಕರಸಿ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

sd/

2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು

ಮತ್ತು ಜೆಎಂಎಫ್‌ಸಿ, ಹರಿಹರ